# Akashvani : Bangalore
# Regional Bulletin In Kannada
# 11.07.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಗಡಿಯಲ್ಲಿ ಸೈನಿಕ, ಗಡಿಯೊಳಗೆ ಆರಕ್ಷಕ. ಈ ಇಬ್ಬರಿಂದ ದೇಶಕ್ಕೆ ನೆಮ್ಮದಿ- ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

**೨. ರಾಜ್ಯದ ಅಭಿವೃದ್ಧಿ ಮತ್ತು ಜನಸೇವೆಯಲ್ಲಿ ಸರ್ಕಾರಿ ನೌಕರರ ಪಾತ್ರ ಮಹತ್ವದ್ದಾಗಿದೆ - ಮುಖ್ಯಮಂತ್ರಿ ಶ್ಲಾಘನೆ**

**೩. ವಿಶ್ವ ಜನಸಂಖ್ಯಾ ದಿನವು ಪ್ರತಿಯೊಬ್ಬ ನಾಗರಿಕನ ಅಗತ್ಯ ಮತ್ತು ಆಕಾಂಕ್ಷೆಗಳ ಅಭಿವೃದ್ಧಿ ವೇಗವನ್ನು ನೆನಪಿಸುವ ದಿನ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್**

**೪. ಗ್ರಾಮ ಆಡಳಿತಾಧಿಕಾರಿ ನೇಮಕಾತಿ - ಕಲ್ಯಾಣ ಕರ್ನಾಟಕ ವೃಂದಕ್ಕೆ ಸ್ಪರ್ಧಾತ್ಮಕ ಪರೀಕ್ಷೆ**

**<><*<><>*><>**

ಗಡಿಯಲ್ಲಿ ಸೈನಿಕ, ಗಡಿಯೊಳಗೆ ಆರಕ್ಷಕ. ಈ ಇಬ್ಬರಿಂದ ನಮ್ಮ ರಾಜ್ಯ ಹಾಗೂ ದೇಶ ನೆಮ್ಮದಿ ಆಗಿರಲು ಅನುಕೂಲವಾಗುತ್ತಿದೆ. ಪೊಲೀಸ್ ಇಲಾಖೆಗೆ ವಾಹನಗಳನ್ನು ನೀಡುತ್ತಿರುವುದು ಹೊಸ ಶಕ್ತಿ ತುಂಬಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮುಂಭಾಗದಲ್ಲಿಂದು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ರಾಜ್ಯದ ಜಿಲ್ಲಾ ಘಟಕಗಳಿಗೆ ೩೨ ಅತ್ಯಾಧುನಿಕ ಮೊಬೈಲ್ ಫೋರೆನ್ಸಿಕ್ ವ್ಯಾನ್‌ಗಳು ಹಾಗೂ ೭೫ ಬೊಲೆರೋ ವಾಹನಗಳನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು. ಮಾದಕ ವಸ್ತುಗಳನ್ನು ವಶ ಪಡಿಸಿ ಪೊಲೀಸ್ ಅಧಿಕಾರಿಗಳು ಸಾಧನೆ ಮಾಡಿದ್ದಾರೆ. ಅವರಿಗೆ ಸರ್ಕಾರದ ಪರವಾಗಿ, ರಾಜ್ಯದ ಜನತೆಯ ಪರವಾಗಿ ಅಭಿನಂದನೆ ಸಲ್ಲಿಸಿದರು. ಪೊಲೀಸ್ ಅಧಿಕಾರಿಗಳು ಈಗಾಗಲೇ ಸಾವಿರಾರು ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿದ್ದಾರೆ. ಇದೊಂದು ದೊಡ್ಡ ದಾಖಲೆಯಾಗಿದೆ. ಕರ್ನಾಟಕ ಪೊಲೀಸ್ ಇಲಾಖೆ ಅಧಿಕಾರಿಗಳ ಸಾಮರ್ಥ್ಯವನ್ನು ಇಡೀ ದೇಶವೇ ಕೊಂಡಾಡುತ್ತಿದೆ. ನಿಮ್ಮ ದಕ್ಷತೆ, ಕಾರ್ಯಪಡೆ, ನಿಷ್ಠೆಯಿಂದ ರಾಜ್ಯಕ್ಕೆ ಹೆಸರನ್ನು ತಂದಿದ್ದೀರಿ. ಹಗಲು ರಾತ್ರಿ ಕೆಲಸ ಮಾಡುವ ನಿಮ್ಮ ಪರವಾಗಿ ಸರ್ಕಾರ ನಿಲ್ಲಲಿದೆ. ಜನರಿಗೆ ನಿಮ್ಮ ಮೇಲೆ ವಿಶ್ವಾಸ ಮೂಡುವ ರೀತಿಯಲ್ಲಿ ಕೆಲಸ ಮಾಡಿ. ಇಂದು ಎಲ್ಲಾ ಜಿಲ್ಲಾ ಘಟಕಗಳಿಗೆ ಬೊಲೆರೋ ವಾಹನಗಳನ್ನು ನೀಡುತ್ತಿದ್ದು, ಇವುಗಳಿಂದ ಅಪರಾಧಿಗಳನ್ನು ಕಂಡು ಹಿಡಿಯಲು ಅನುಕೂಲವಾಗಲಿ ಎಂದು ಶುಭಹಾರೈಸಿದರು.

**<><*<><>*><>**

ರಾಜ್ಯದ ಅಭಿವೃದ್ಧಿ ಮತ್ತು ಜನಸೇವೆಯಲ್ಲಿ ಸರ್ಕಾರಿ ನೌಕರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರ ನಿಷ್ಠೆ, ಪ್ರಾಮಾಣಿಕತೆ ಮತ್ತು ಸೇವಾ ಮನೋಭಾವ ಶ್ಲಾಘನೀಯ. ಉತ್ತಮ ಆಡಳಿತಕ್ಕಾಗಿ ಸರ್ಕಾರ ಸದಾ ಅವರೊಂದಿಗೆ ಕೈಜೋಡಿಸಿ ಕೆಲಸ ಮಾಡಲಿದೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಅರಮನೆ ಮೈದಾನದಲ್ಲಿ ಇಂದು ನಡೆದ’ ನಮ್ಮಭಿಮಾನದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿ, ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ, ಉಪಮುಖ್ಯಮಂತ್ರಿಗಳಾದ ಡಾ.ಜಿ. ಪರಮೇಶ್ವರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ, ಎಲ್. ಭೈರಪ್ಪ, ರಮೇಶ್ ಸಂಗಾ, ಅಮೃತ್ ರಾಜ್, ಬಸವರಾಜು ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಇಂದು ವಿಶ್ವ ಜನಸಂಖ್ಯಾ ದಿನ. ಪ್ರತಿ ವರ್ಷ ಜುಲೈ ೧೧ರಂದು ಆಚರಿಸಲಾಗುವ ಈ ದಿನ, ಹೆಚ್ಚುತ್ತಿರುವ ಜನಸಂಖ್ಯೆಯಿಂದ ಉಂಟಾಗುವ ಸವಾಲುಗಳು ಮತ್ತು ಅವಕಾಶಗಳ ಬಗ್ಗೆ ಬೆಳಕು ಚೆಲ್ಲುತ್ತದೆ. ಅಲ್ಲದೆ, ಜನಸಂಖ್ಯೆಗೆ ಸಂಬಂಧಿಸಿದ ಕಾಳಜಿಗಳನ್ನು ಪರಿಹರಿಸಲು ಮತ್ತು ಸುಸ್ಥಿರ ಭವಿಷ್ಯದತ್ತ ಕೆಲಸ ಮಾಡುವುದನ್ನು ನೆನಪಿಸುತ್ತದೆ. 'ಇಂದು ಮತ್ತು ಭವಿಷ್ಯಕ್ಕಾಗಿ ಯುವಜನರ ನಿರೀಕ್ಷೆ ಮತ್ತು ಆಕಾಂಕ್ಷೆಗಳನ್ನು ಅರಿತುಕೊಳ್ಳುವುದು' ಈ ವರ್ಷದ ವಿಶ್ವ ಜನಸಂಖ್ಯಾ ದಿನದ ಘೋಷವಾಕ್ಯವಾಗಿದೆ. ವಿಶ್ವ ಜನಸಂಖ್ಯಾ ದಿನವು ಪ್ರತಿಯೊಬ್ಬ ನಾಗರಿಕನ ಅಗತ್ಯತೆಗಳು ಮತ್ತು ಆಕಾಂಕ್ಷೆಗಳಿಗೆ ಅನುಗುಣವಾಗಿ ಅಭಿವೃದ್ಧಿಯು ವೇಗವನ್ನು ಪಡೆದುಕೊಳ್ಳಬೇಕು ಎಂಬುದನ್ನು ನೆನಪಿಸುವ ದಿನವಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಆರೋಗ್ಯ ರಕ್ಷಣೆ, ಶಿಕ್ಷಣ, ಲಿಂಗ ಸಮಾನತೆ, ಮಾಹಿತಿ ಆಧಾರಿತ ಆಯ್ಕೆಗಳು ಮತ್ತು ಸುಸ್ಥಿರ ಬೆಳವಣಿಗೆಯನ್ನು ಬಲಪಡಿಸುವ ಮೂಲಕ, ಪ್ರತಿಯೊಬ್ಬ ವ್ಯಕ್ತಿಯೂ ಘನತೆ, ಭದ್ರತೆ ಮತ್ತು ಭರವಸೆಯೊಂದಿಗೆ ಬದುಕಲು ಅವಕಾಶವಿರುವಂತಹ ಕರ್ನಾಟಕವನ್ನು ನಾವು ನಿರ್ಮಿಸಬಹುದು ಎಂದು ಹೇಳಿದ್ದಾರೆ.

<><*<><>*><>

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ವಿವಿಧ ಜಿಲ್ಲೆಗಳಲ್ಲಿನ ಗ್ರೂಪ್-ಸಿ ವೃಂದದ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಧಿಸೂಚನೆ ಹೊರಡಿಸಿದೆ. ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಧಿಸೂಚನೆಯ ಪ್ರಕಾರ, ಕಲಬುರಗಿ ಜಿಲ್ಲೆಯಲ್ಲಿ ೪೦ ಹುದ್ದೆಗಳು, ಬೀದರ್‌ನಲ್ಲಿ ೧೭ ಹುದ್ದೆಗಳು, ಮತ್ತು ರಾಯಚೂರಿನಲ್ಲಿ ೧೦ ಹುದ್ದೆಗಳು ಖಾಲಿ ಇದ್ದು, ಒಟ್ಟು ೬೭ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಭರ್ತಿ ಮಾಡಲಾಗುತ್ತದೆ. ಅಭ್ಯರ್ಥಿಗಳು ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಅರ್ಜಿ ಸಲ್ಲಿಕೆ ಪ್ರಕ್ರಿಯೆ ಜುಲೈ ೧೧ರಿಂದ ಆರಂಭವಾಗಿ ಜುಲೈ ೩೦ರ ವರೆಗೆ ನಡೆಯಲಿದ್ದು, ಶುಲ್ಕ ಪಾವತಿಗೆ ಕೊನೆಯ ದಿನಾಂಕ ಜುಲೈ ೩೧ ಎಂದು ನಿಗದಿಯಾಗಿದೆ. ಅಭ್ಯರ್ಥಿಗಳ ಕನಿಷ್ಠ ವಯಸ್ಸು ೧೮ ವರ್ಷ ಮತ್ತು ಗರಿಷ್ಠ ವಯಸ್ಸು ೩೫ ವರ್ಷವಾಗಿರಬೇಕು. ಮೀಸಲಾತಿ ವರ್ಗದ ಅಭ್ಯರ್ಥಿಗಳಿಗೆ ಸರ್ಕಾರದ ನಿಯಮಾನುಸಾರ ವಯೋಮಿತಿ ಸಡಿಲಿಕೆ ನೀಡಲಾಗುತ್ತದೆ.

<><*<><>*><>

ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ೨೦೨೬-೨೭ನೇ ಸಾಲಿನ ಮುಂಗಾರು ಹಂಗಾಮಿನ ತೋಟಗಾರಿಕೆ ಬೆಳೆಗಳ ಬೆಳೆ ವಿಮಾ ನೋಂದಣಿ ಆರಂಭವಾಗಿದೆ. ಚಿತ್ರದುರ್ಗ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಮಳೆಯಾಶ್ರಿತ ಹಾಗೂ ನೀರಾವರಿ ಈರುಳ್ಳಿ, ಮಳೆಯಾಶ್ರಿತ ಟೊಮ್ಯಾಟೋ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗಳನ್ನು ವಿಮೆಗೆ ಅಧಿಸೂಚಿಸಲಾಗಿದೆ. ಇಫ್ಕೊ ಟೋಕಿಯೋ ಜನರಲ್ ಇನ್ಸೂರೆನ್ಸ್ ಕಂಪನಿ ಯೋಜನೆಯನ್ನು ಜಾರಿಗೊಳಿಸಲಿದೆ. ನೀರಾವರಿ ಈರುಳ್ಳಿ ಬೆಳೆಗೆ ವಿಮೆ ನೋಂದಣಿಯ ಕೊನೆಯ ದಿನಾಂಕ ಜುಲೈ ೧೫. ಉಳಿದ ಬೆಳೆಗಳಿಗೆ ಜುಲೈ ೩೧ರವರೆಗೆ ಅವಕಾಶವಿದೆ. ಅರ್ಹ ರೈತರು ಹತ್ತಿರದ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ತೋಟಗಾರಿಕೆ ಇಲಾಖೆ ಕಚೇರಿಯನ್ನು ಸಂಪರ್ಕಿಸುವಂತೆ ಇಲಾಖೆ ತಿಳಿಸಿದೆ.

<><*<><>*><>

ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾಯರ ೧೪೬ನೇ ಜನ್ಮದಿನಾಚರಣೆ ನಾಳೆ ಧಾರವಾಡದ, ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜರುಗಲಿದೆ. ಹಿರಿಯ ಸಾಹಿತಿ ಡಾಕ್ಟರ್ ಸಿದ್ಧಲಿಂಗ ಪಟ್ಟಣಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕರ್ನಾಟಕ ಏಕೀಕರಣ ಹೋರಾಟಗಾರರ ವ್ಯಕ್ತಿಚಿತ್ರ ಮಾಲೆಯಡಿ ಮರು ಮುದ್ರಿತ, ಡೆಪ್ಯುಟಿ ಚೆನ್ನಬಸಪ್ಪ ಹಾಗೂ ಆಲೂರು ವೆಂಕಟರಾಯರ ಪುಸ್ತಕಗಳನ್ನು ಬಿಡುಗಡೆ ಮಾಡಲಿದ್ದಾರೆ.

**<><*<><>*><>**

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ಕಂಬಳವನ್ನು ಆಯೋಜಿಸಲು ಮುಂದಾಗಿರುವ ರಾಜ್ಯ ಸರ್ಕಾರದ ನಡೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಮೈಸೂರಿನಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದಸರಾ ವೇಳೆ ಕಂಬಳ ಆಯೋಜಿಸುವುದು ಸೂಕ್ತವಲ್ಲ. ಸರ್ಕಾರ ಹಠಮಾರಿ ಧೋರಣೆ ಬಿಟ್ಟು ಮೈಸೂರಿನ ಜನರ ಸಾಂಸ್ಕೃತಿಕ ಭಾವನೆಗಳಿಗೆ ಗೌರವ ನೀಡಬೇಕು ಎಂದು ಒತ್ತಾಯಿಸಿದರು. ಕರಾವಳಿ ಭಾಗದ ವಿಶಿಷ್ಟ ಪರಂಪರೆಯಾದ ಕಂಬಳಕ್ಕೆ ತನ್ನದೇ ಆದ ಶ್ರೀಮಂತ ಇತಿಹಾಸವಿದೆ. ಅದನ್ನು ಕರಾವಳಿ ಜಿಲ್ಲೆಗಳಲ್ಲೇ ಅತ್ಯಂತ ಅದ್ದೂರಿಯಾಗಿ ಆಯೋಜಿಸಲಿ, ಅದಕ್ಕೆ ನಮ್ಮ ಸಂಪೂರ್ಣ ಸಹಕಾರವಿರಲಿದೆ. ಆದರೆ, ಕರಾವಳಿಯ ಪರಂಪರೆಯನ್ನು ಮೈಸೂರಿನ ದಸರಾ ಸಂಸ್ಕೃತಿಯೊಂದಿಗೆ ಬೆರೆಸುವುದು ಬೇಡ ಎಂದು ವಿಜಯೇಂದ್ರ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ಅವರು ಜಿಲ್ಲೆಯ ದೊಡ್ಡಬಳ್ಳಾಪುರ ನಗರದ ಮತಗಟ್ಟೆಗಳಿಗೆ ಭೇಟಿ ನೀಡಿ ಎಸ್.ಐ.ಆರ್ ಪ್ರಕ್ರಿಯೆಗಳನ್ನು ಪರಿಶೀಲನೆ ನಡೆಸಿದರು. ಜಿಲ್ಲೆಯಲ್ಲಿ ಈಗಾಗಲೇ ಮತದಾರರ ಪಟ್ಟಿಯಲ್ಲಿ ೯ ಲಕ್ಷದ ೧೨ ಸಾವಿರ ೯೧೩ ಮತದಾರರಿದ್ದು, ಈ ಪೈಕಿ ೮ ಲಕ್ಷದ ೭೬ ಸಾವಿರದ ೫೫೬ ಅಂದರೆ ಶೇಕಡ ೯೬ ರಷ್ಟು ಗಣತಿ ನಮೂನೆಯನ್ನು ವಿತರಿಸಲಾಗಿದೆ. ಸಂಗ್ರಹಿಸಲಾದ ಮಾಹಿತಿ ಪ್ರಕಾರ ೯೬೮ ಮಂದಿ ಮೃತಪಟ್ಟಿರುವ ಮತದಾರರು, ೩೮೮ ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು ಹಾಗೂ ೨೬೪ ಮಂದಿ ಈಗಾಗಲೇ ನೋಂದಣಿಯಾಗಿರುವ ಮತದಾರರನ್ನು ಗುರುತಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್.ಅನುರಾಧ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ತಲೆದೋರಿರುವ ಭೀಕರ ಬರಗಾಲದ ಸಂದರ್ಭದಲ್ಲಿ ರೈತರ ಕೈಹಿಡಿಯಬೇಕಾದ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಬೇಜವಾಬ್ದಾರಿಯಿಂದ ವರ್ತಿಸುತ್ತಿದೆ" ಮುಖ್ಯಮಂತ್ರಿಗಳು ಸಭೆ ಸಮಾರಂಭ ಬಿಟ್ಟು ಬರ ತಾಲೂಕುಗಳ ಕಡೆ ಗಮನಕೊಡಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಗದಗದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ, ಮುಂಬೈ ಕರ್ನಾಟಕದ ಬಹುತೇಕ ಬಯಲು ಸೀಮೆ ಪ್ರದೇಶಗಳು ಭೀಕರ ಬರಗಾಲಕ್ಕೆ ತುತ್ತಾಗಿವೆ. ಕರಾವಳಿ ಮತ್ತು ಮಲೆನಾಡಿನ ಕೆಲವು ತಾಲೂಕುಗಳಲ್ಲಿ ಮಾತ್ರ ಮಳೆಯಾಗಿದೆ. ಅದನ್ನು ನೆಪವಾಗಿಟ್ಟುಕೊಂಡು ಮುಖ್ಯಮಂತ್ರಿಗಳು "ನೋಡಿಕೊಂಡು ಬರ ಘೋಷಣೆ ಮಾಡುತ್ತೇವೆ" ಎಂದು ಗಾಂಭೀರ್ಯವಿಲ್ಲದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಟೀಕಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**